# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 384 ಗ್ರಾಪಂಕಾ 2018(ಭಾಗ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 23.11.2018

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ:

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು

ಮಾನ್ಯರೆ,

ವಿಷಯ: ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಸ್ಥಳೀಯ ಮಟ್ಟದಲ್ಲಿ ವರ್ಗಾವಣೆ/ನಿಯೋಜನೆ ಮಾಡುತ್ತಿರುವ ಬಗ್ಗೆ.

ಉಲ್ಲೇಖ:
1) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 591 ಗ್ರಾಪಂಕಾ 2014, ದಿನಾಂಕ 01.01.2015
2) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 416 ಗ್ರಾಪಂಅ 2014, ದಿನಾಂಕ 30.06.2014
3) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 639 ಗ್ರಾಪಂಕಾ 2017, ದಿನಾಂಕ 16.01.2018

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಮಾರ್ಗಸೂಚಿಗಳಿಗೆ ವಿರುದ್ಧವಾಗಿ ಸ್ಥಳೀಯ ಮಟ್ಟದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ವರ್ಗಾವಣೆ/ನಿಯೋಜನೆಗಳನ್ನು ಮಾಡಬಾರದಾಗಿ ಉಲ್ಲೇಖಿತ ಸರ್ಕಾರದ ಸುತ್ತೋಲೆಗಳಲ್ಲಿ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ. ಹೀಗೆ ಮಾಡಲಾದ ಎಲ್ಲಾ ವರ್ಗಾವಣೆ/ನಿಯೋಜನೆಗಳನ್ನು ರದ್ದುಗೊಳಿಸಿ, ಮೂಲಸ್ಥಾನಗಳಿಗೆ ಹಿಂದಿರುಗಿಸಲು ತಿಳಿಸಲಾಗಿದೆ. ಆದಾಗ್ಯೂ ಕೆಲವು ಜಿಲ್ಲೆಗಳಲ್ಲಿ ಸ್ಥಳೀಯವಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ನಿಯೋಜನೆ ಮಾಡಿರುವುದು ಹಾಗೂ ನಿಯೋಜನೆಗಳಲ್ಲಿರುವವರನ್ನು ಮುಂದುವರೆಸಿರುವುದು ಕಂಡುಬಂದಿದೆ. ಈ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದ್ದು, ಈ ಕೆಳಗಿನಂತೆ ಕ್ರಮ ಕೈಗೊಳ್ಳಲು ಆದೇಶಿಸಿದೆ.

1) ನಿಯೋಜನೆ ಮೇಲೆ ತಾಲ್ಲೂಕು ಪಂಚಾಯತಿ/ಜಿಲ್ಲಾ ಪಂಚಾಯತಿಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಕೂಡಲೇ ಬಿಡುಗಡೆ ಮಾಡಿ ಮೂಲ ಸ್ಥಾನಗಳಿಗೆ ಹಿಂದಿರುಗಿಸಿ ವರದಿ ಮಾಡಿಕೊಳ್ಳಲು ಆದೇಶಿಸುವುದು. ಒಂದು ಪಕ್ಷ ತಾಲ್ಲೂಕು ಪಂಚಾಯತಿ/ಜಿಲ್ಲಾ ಪಂಚಾಯತಿಗಳಲ್ಲಿ ಹುದ್ದೆಗಳು ಖಾಲಿ ಇದ್ದು, ಕಾರ್ಯನಿರ್ವಹಣೆಗೆ ತೊಂದರೆಯಿದ್ದಲ್ಲಿ ಆ ಖಾಲಿ ಹುದ್ದೆಗಳಿಗೆ ಎದುರಾಗಿ ಸಮಾನಾಂತರ ವೇತನ ಶ್ರೇಣಿ ಹೊಂದಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಖಾಲಿಯಿರುವ ಹುದ್ದೆಗಳಿಗೆ ಮಾತ್ರ ಸೀಮಿತಗೊಳಿಸಿ ನಿಯೋಜನೆ ಮಾಡಿಕೊಳ್ಳುವುದು ಅಥವಾ ಮುಂದುವರೆಸುವುದು.

--

2) ಅನ್ಯ ಇಲಾಖೆಗಳಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಕೂಡಲೇ ರದ್ದುಗೊಳಿಸಿ ಅವರ ಸೇವೆಯನ್ನು ಹಿಂಪಡೆದು ಮೂಲಸ್ಥಾನಗಳಲ್ಲಿ ವರದಿ ಮಾಡಿಕೊಳ್ಳಲು ಆದೇಶಿಸಿದೆ.

3) ಹೊರ ಜಿಲ್ಲೆಗಳಲ್ಲಿ ಜಿಲ್ಲೆಯಿಂದ ಜಿಲ್ಲೆಗೆ ಸರ್ಕಾರದ ವತಿಯಿಂದ ಮಾಡಲಾದ ಆದೇಶದನ್ವಯ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ನಿಯೋಜನೆಗಳನ್ನು ಕೂಡಲೇ ರದ್ದುಪಡಿಸಿ, ಮೂಲಸ್ಥಾನಗಳಲ್ಲಿ ವರದಿ ಮಾಡಿಕೊಳ್ಳಲು ಆದೇಶಿಸಿದೆ.

4) ಜಿಲ್ಲೆಯ ಒಳಗೆ ಇತರೆ ತಾಲ್ಲೂಕುಗಳಲ್ಲಿ ಹಾಗೂ ಇತರೆ ಗ್ರಾಮ ಪಂಚಾಯತಿಗಳಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ನಿಯೋಜನೆಗಳನ್ನು ಕೂಡಲೇ ರದ್ದುಪಡಿಸಿ, ಮೂಲಸ್ಥಾನಗಳಲ್ಲಿ ವರದಿ ಮಾಡಿಕೊಳ್ಳಲು ಆದೇಶಿಸುವುದು.

5) ಸಂಸತ್‌ಸದಸ್ಯರು, ರಾಜ್ಯಸಭಾ ಸದಸ್ಯರು, ವಿಧಾನಸಭೆ/ವಿಧಾನಪರಿಷತ್ ಸದಸ್ಯರುಗಳು, ಮಾನ್ಯ ಸಚಿವರುಗಳು ಹಾಗೂ ಜಿಲ್ಲಾ ಪಂಚಾಯತಿ ಅಧ್ಯಕ್ಷರುಗಳ ಕಛೇರಿಗಳಲ್ಲಿ ಮಂಜೂರಾದ ಹುದ್ದೆಗೆ ಎದುರಾಗಿ ಕಾರ್ಯನಿರ್ವಹಿಸುತ್ತಿರುವವರನ್ನು ಹೊರತುಪಡಿಸಿ, ಅನ್ಯ ಕಾರ್ಯನಿಮಿತ್ತ ಕಾರ್ಯನಿರ್ವಹಿಸುತ್ತಿರುವ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ನಿಯೋಜನೆಗಳನ್ನು ಕೂಡಲೇ ರದ್ದುಪಡಿಸಿ, ಮೂಲಸ್ಥಾನಗಳಲ್ಲಿ ವರದಿ ಮಾಡಿಕೊಳ್ಳಲು ಆದೇಶಿಸುವುದು.

6) ಹೀಗೆ ರದ್ದುಪಡಿಸಿದ ಆದೇಶಗಳ ರೀತ್ಯಾ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ಕೂಡಲೇ ಮೂಲಸ್ಥಾನಗಳಲ್ಲಿ ವರದಿ ಮಾಡಿಕೊಳ್ಳುವುದನ್ನು ಒಂದು ವಾರದಲ್ಲಿ ಖಚಿತಪಡಿಸುವುದು.

7) ಇನ್ನು ಮುಂದೆ ಸರ್ಕಾರದ ಪೂರ್ವಾನುಮೋದನೆ ಇಲ್ಲದೆ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿ ಮಟ್ಟದಲ್ಲಿ ಯಾವುದೇ ರೀತಿಯ ವರ್ಗಾವಣೆ/ನಿಯೋಜನೆಗಳನ್ನು ಮಾಡಬಾರದು.

8) ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆ ನಿವೃತ್ತಿ, ಅಮಾನತ್ತು ಹಾಗೂ ಇನ್ನಿತರೆ ಕಾರಣಗಳಿಗೆ ತೆರವಾದಲ್ಲಿ, ಆ ಗ್ರಾಮ ಪಂಚಾಯತಿಯಲ್ಲಿ ಗ್ರೇಡ್-1 ಕಾರ್ಯದರ್ಶಿ ಪೂರ್ಣಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಅವರಿಗೆ ಪ್ರಭಾರ ವಹಿಸುವುದು. ಪೂರ್ಣಕಾಲಿಕ ಗ್ರೇಡ್-1 ಕಾರ್ಯದರ್ಶಿ ಇಲ್ಲದಿದ್ದಲ್ಲಿ ನೆರೆಯ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿಗೆ ಹೆಚ್ಚುವರಿ ಪ್ರಭಾರ ವಹಿಸುವುದು. ಗ್ರೇಡ್-2 ಕಾರ್ಯದರ್ಶಿ ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಯ ಪ್ರಭಾರ ವಹಿಸಬಾರದಾಗಿ ತಿಳಿಸಿದೆ.

9) ಮೇಲಿನ ಸೂಚನೆಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಿ, ಕೈಗೊಂಡ ಕ್ರಮದ ಬಗ್ಗೆ ಸರ್ಕಾರಕ್ಕೆ ನವೆಂಬರ್ ಅಂತ್ಯದೊಳಗೆ ವರದಿ ನೀಡಲು ಆದೇಶಿಸಿದೆ.

ಈ ಆದೇಶ ಪಾಲನೆ ಮಾಡದಿರುವವರ ಹಾಗೂ ಉಲ್ಲಂಘಿಸುವ ಅಧಿಕಾರಿಗಳ ವಿರುದ್ಧ ಸೂಕ್ತ ಶಿಸ್ತಿನ ಕ್ರಮ ಜರುಗಿಸಲಾಗುವುದು.

ನಿಮ್ಮ ನಂಬುಗೆಯ,

24/11/18

(ಎಲ್.ಕೆ.ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಅವಗಾಹನೆಗಾಗಿ:

1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2) ಎಲ್ಲಾ ಜಿಲ್ಲಾ ಪಂಚಾಯತಿ/ತಾಲ್ಲೂಕು ಪಂಚಾಯತಿ ಅಧ್ಯಕ್ಷರುಗಳು.

ಸೂಕ್ತ ಕ್ರಮಕ್ಕಾಗಿ:

1) ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
2) ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು.